# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1860 (2153)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಐ.ಎಂ.ಎ. ಹಗರಣ ಕುರಿತು

(ಅ) ಐ.ಎಂ.ಎ. ಹಗರಣದಲ್ಲಿ ಐ.ಪಿ.ಎಸ್. ಅಧಿಕಾರಿಗಳು ಸೇರಿದಂತೆ ಹಲವಾರು ಅಧಿಕಾರಿಗಳು ಲಂಚ ಪಡೆದಿರುವುದಾಗಿ ಸಿ.ಬಿ.ಐ. ಜಾರ್ಜ್ ಶೀಟ್‌ನಲ್ಲಿ ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರೀತಿಯಾಗಿ ಅಧಿಕಾರಿಗಳು ಪಡೆದಿರುವ ಲಂಚದ ಹಣವು ಬಡ ಹೂಡಿಕೆದಾರರ ಹಣವಾಗಿರುವ ಕಾರಣ ಲಂಚ ಪಡೆದ ಅಧಿಕಾರಿಗಳ ಎಲ್ಲಾ ಸ್ಥಿರ ಮತ್ತು ಚರ ಆಸ್ತಿಗಳನ್ನು ಸರ್ಕಾರ ವಶಕ್ಕೆ ಪಡೆದು ಹೂಡಿಕೆದಾರರಿಗೆ ಹಿಂತಿರುಗಿಸುವ ಕುರಿತು ಸರ್ಕಾರದ ನಿಲುವೇನು ?

(ಆ) ಲಂಚ ಪಡೆದ ಆರೋಪಿ ಅಧಿಕಾರಿಗಳ ಎಲ್ಲಾ ಸ್ಥಿರ ಆಸ್ತಿಯನ್ನು ಯಾವ ಕಾಲಮಿತಿಯೊಳಗೆ ವಶಪಡಿಸಿಕೊಳ್ಳಲಾಗುವುದು ; ಸದರಿ ಅಧಿಕಾರಿಗಳ ಬ್ಯಾಂಕ್ ಖಾತೆಗಳನ್ನು ಸೀಜ್ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಪ್ರಸ್ತುತ ಸದರಿ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿರುವುದರಿಂದ ಹೂಡಿಕೆದಾರರ ಮೊತ್ತವನ್ನು ಹಿಂತಿರುಗಿಸಲು ಸದರಿ ಅಧಿಕಾರಿಗಳ ವೇತನದಿಂದ ಕಟಾವಣೆ ಮಾಡಿ ಮಾನ್ಯ ನ್ಯಾಯಾಲಯಕ್ಕೆ ಜಮಾ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?